ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ರಾಜ್ಯದಲ್ಲಿ ವನ್ಯ ಜೀವಿಗಳ ಸಂಖ್ಯೆ ಕಡಿಮೆ ಆಗುತ್ತಿರುವ ಕುರಿತು

ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-

1465 (1735) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಳಿವಿನ ಅಂಚಿನಲ್ಲಿರುವ ವನ್ಯಜೀವಿಗಳ ಸಂರಕ್ಷಣೆಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಆ) ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿನ ವನ್ಯಜೀವಿಗಳ ಸಂರಕ್ಷಣೆಗೆ, ವಿವಿಧ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು ; (ಯೋಜನೆವಾರು, ವಿಭಾಗವಾರು ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಮರಣ ಹೊಂದಿರುವ ವನ್ಯಜೀವಿಗಳ ಸಂಖ್ಯೆ ಎಷ್ಟು ; ಅವು ಯಾವುವು ? (ಜಿಲ್ಲಾವಾರು, ವಿಭಾಗವಾರು ವಿವರ ನೀಡುವುದು)